# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 89 |
| ಮಾನ್ಯ ಸದಸ್ಯರ ಹೆಸರು | ಶ್ರೀ ಪ್ರಕಾಶ್ ಬಾಬಣ್ಣ ಹುಕ್ಕೇರಿ (ಶಿಕ್ಷಕರ ಕ್ಷೇತ್ರ) |
| ಉತ್ತರಿಸುವ ಸಚಿವರು | ಉನ್ನತ ಶಿಕ್ಷಣ ಸಚಿವರು |
| ಉತ್ತರಿಸಬೇಕಾದ ದಿನಾಂಕ | 09.12.2024 |

| | ಪ್ರಶ್ನೆ | ಉತ್ತರ |
|---|---|---|
| (ಅ) | ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯದ ವತಿಯಿಂದ ದೂರು ಶಿಕ್ಷಣ ವ್ಯವಸ್ಥೆಯಲ್ಲಿ ಸ್ನಾತಕ /ಸ್ನಾತಕೋತ್ತರ ವಿದ್ಯಾರ್ಥಿಗಳಿಂದ ಪ್ರವೇಶಾತಿ ಸಮಯದಲ್ಲಿ ಪಠ್ಯ ಪುಸ್ತಕಗಳಿಗಾಗಿ ಸಾವಿರಾರು ರೂಪಾಯಿಗಳ ಶುಲ್ಕ ಪಡೆದರೂ, ಇಲ್ಲಿಯವರೆಗೆ ಪಠ್ಯ ಪುಸ್ತಕಗಳನ್ನು ಒದಗಿಸದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಇದಕ್ಕೆ ಕಾರಣರಾದವರ ವಿರುದ್ಧ ಸರ್ಕಾರವು ಕೈಗೊಂಡಿರುವ ಕ್ರಮಗಳೇನು; | ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯದ ದೂರು ಶಿಕ್ಷಣ ವ್ಯವಸ್ಥೆಯಲ್ಲಿ ಸ್ನಾತಕ /ಸ್ನಾತಕೋತ್ತರ ಪದವಿಗೆ ಪ್ರವೇಶಾತಿ ಪಡೆದ ವಿದ್ಯಾರ್ಥಿಗಳಿಗೆ ಪ್ರವೇಶಾತಿ ಸಮಯದಲ್ಲಿ ಪಠ್ಯ ಪುಸ್ತಕಗಳನ್ನು ವಿಶ್ವವಿದ್ಯಾನಿಲಯದ ವತಿಯಿಂದ ಒದಗಿಸದಿರುವ ಬಗ್ಗೆ ಸರ್ಕಾರದಲ್ಲಿ ಯಾವುದೇ ದೂರು/ಮನವಿ ಸ್ವೀಕೃತವಾಗಿರುವುದಿಲ್ಲ.<br><br>ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯದ ವತಿಯಿಂದ ದೂರು ಶಿಕ್ಷಣ ವ್ಯವಸ್ಥೆಯಲ್ಲಿ ಪ್ರವೇಶಾತಿ ಪಡೆದ ಸ್ನಾತಕ ವಿದ್ಯಾರ್ಥಿಗಳಿಗೆ ಪಠ್ಯ ಪುಸ್ತಕಗಳನ್ನು ಸರಿಯಾಗಿ ವಿತರಣೆ ಮಾಡಲಾಗುತ್ತಿದ್ದು, 2020-21ನೇ ಸಾಲಿನಿಂದ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯವು ಎಲ್ಲಾ ಸ್ನಾತಕೋತ್ತರ ವಿಷಯಗಳಿಗೆ ಸಿ.ಬಿ.ಸಿ.ಎಸ್. ಪಠ್ಯ ಕ್ರಮವನ್ನು ಅಳವಡಿಸಿಕೊಂಡ ಹಿನ್ನೆಲೆಯಲ್ಲಿ ಮುದ್ರಣ ಕಾರ್ಯ ವಿಶ್ವವಿದ್ಯಾಲಯದಿಂದ ವಿಳಂಭವಾಗಿದ್ದು, ವಿದ್ಯಾರ್ಥಿಗಳಿಗೆ ಸಾಫ್ಟ್ ಕಾಪಿಗಳ ಮೂಲಕ ವಿದ್ಯಾಭ್ಯಾಸಕ್ಕೆ ಅನುಕೂಲ ಕಲ್ಪಿಸಲಾಗಿರುತ್ತದೆ ಹಾಗೂ ಬೋಧನಾ ಶುಲ್ಕದಲ್ಲಿ ರಿಯಾಯಿತಿಯನ್ನು ನೀಡಲಾಗುತ್ತಿದೆ.<br><br>ಸಿ.ಬಿ.ಸಿ.ಎಸ್. ಪಠ್ಯಕ್ರಮಗಳ ಅಧ್ಯಯನ ಸಾಮಗ್ರಿಗಳನ್ನು ಮುದ್ರಿಸುವ ಸಂಬಂಧ ಇ-ಪ್ರೊಕ್ಯೂರ್‌ಮೆಂಟ್ ಟೆಂಡರ್ ಆಹ್ವಾನಿಸಲು ವಿಶ್ವವಿದ್ಯಾಲಯದ ಸಕ್ಷಮ ಪ್ರಾಧಿಕಾರದಿಂದ ಅನುಮೋದನೆ ಪಡೆಯಲಾಗಿದ್ದು, ಪ್ರಕ್ರಿಯೆಯು ಪ್ರಗತಿಯಲ್ಲಿರುತ್ತದೆ. ಮುಂಬರುವ ದಿನಗಳಲ್ಲಿ ಪ್ರವೇಶಾತಿ ಪಡೆಯುವ ವಿದ್ಯಾರ್ಥಿಗಳಿಗೆ ಸ್ಥಳದಲ್ಲಿಯೇ ಅಧ್ಯಯನ ಸಾಮಗ್ರಿಗಳನ್ನು ವಿತರಿಸಲು ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯವು ಕ್ರಮವಹಿಸುತ್ತದೆ. |
| (ಆ) | ಸಕಾಲದಲ್ಲಿ ಪಠ್ಯ ಪುಸ್ತಕಗಳನ್ನು ಒದಗಿಸದಿರುವುದರಿಂದ ಲಭ್ಯ ಸಾಫ್ಟ್ ಕಾಪಿಯನ್ನು ಜೆರಾಕ್ಸ್ ಮಾಡಿಸಿಕೊಳ್ಳುವುದು ಬಡ ವಿದ್ಯಾರ್ಥಿಗಳಿಗೆ ಆರ್ಥಿಕವಾಗಿ ಹೊರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಇದ್ದಲ್ಲಿ ಜೆರಾಕ್ಸ್ ತಗಲುವ ವೆಚ್ಚವನ್ನು ಸರ್ಕಾರವು ಭರಿಸಲಿದೆಯೇ; ಸದರಿ ವಿಶ್ವವಿದ್ಯಾಲಯ ಈ ಬೇಜವಾಬ್ದಾರಿ ನಡೆಗೆ ಕಾರಣರಾದವರ ವಿರುದ್ಧ ಸರ್ಕಾರವು ಕೈಗೊಂಡಿರುವ ಕ್ರಮಗಳೇನು? (ಸಂಪೂರ್ಣವಾಗಿ ವಿವರಿಸುವುದು) | ಪ್ರಸ್ತುತ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯದಲ್ಲಿ ಪ್ರವೇಶಾತಿ ಪಡೆದಿರುವ ವಿದ್ಯಾರ್ಥಿಗಳಿಗೆ ಲಭ್ಯವಿರುವ ಅಧ್ಯಯನ ಸಾಮಗ್ರಿಗಳನ್ನು ವಿತರಿಸಲಾಗುತ್ತಿದ್ದು, ಲಭ್ಯವಿಲ್ಲದ ಅಧ್ಯಯನ ಸಾಮಗ್ರಿಗಳ ಸಾಫ್ಟ್‌ಕಾಪಿಯನ್ನು ವಿದ್ಯಾರ್ಥಿಗಳಿಗೆ ನೀಡಲಾಗುತ್ತಿದ್ದು, ವಿದ್ಯಾರ್ಥಿಗಳಿಗೆ ಆರ್ಥಿಕವಾಗಿ ಹೊರೆಯಾಗದಂತೆ ಬೋಧನಾ ಶುಲ್ಕದಲ್ಲಿ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯವು ಶೇಕಡ 15ರಷ್ಟು ರಿಯಾಯಿತಿಯನ್ನು ನೀಡಲಾಗುತ್ತಿದೆ. |

ಸಂಖ್ಯೆ: ಇಡಿ 51 ಯುಓವಿ 2024

(ಡಾ: ಎಂ. ಸಿ ಸುಧಾಕರ್)
ಉನ್ನತ ಶಿಕ್ಷಣ ಸಚಿವರು